# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಜಿ ಶೋಭಾರಾಣಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಂತೂರು ಗ್ರಾಮ ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:** ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂ/ಕಂಪ್ಲೇಂಟ್/ಉಪಲೋಕ್/ಎಮ್‌ವೈಎಸ್-333/2020/ಪಿಪಿ, ದಿನಾಂಕ:25.01.2021.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದೊಂದಿಗೆ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ:24.01.2022 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಗ್ರಾಮದ ಶ್ರೀ ಈ. ಮೂರ್ತಿ ಎಂಬುವವರು (ಇನ್ನು ಮುಂದೆ ದೂರುದಾರರೆಂದು ಕರೆಯಲ್ಪಡುತ್ತಾರೆ) ದಿನಾಂಕ:06.07.2020 ರಂದು ಲೋಕಾಯುಕ್ತ ಕಛೇರಿಗೆ ದೂರನ್ನು ಸಲ್ಲಿಸಿದ್ದು, ಎದುರುದಾರರು ತನ್ನ ಪಿತ್ರಾರ್ಜಿತ ಆಸ್ತಿಗಳಿಗೆ ಸಂಬಂಧಿಸಿದಂತೆ ಜಂಜರ್ ನಂ.66 ಸ್ವತ್ತಿನ ಸಂಖ್ಯೆ 62 ಕ್ಕೆ ಸಂಬಂಧಿಸಿದಂತೆ ಹೊಸದಾಗಿ ಹೆಸರುಗಳನ್ನು ಸೇರ್ಪಡಿಸಿ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ ತಿದ್ದುಪಡಿ ಮಾಡಿ ಅಕ್ರಮ ಎಸಗಿರುತ್ತಾರೆ ಎಂದು ಆಪಾದಿಸಿರುತ್ತಾರೆ.

ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕುಂತೂರು ರವರು ಹಾಗೂ ಗೌರೀಶ, ಪೋಲೀಸ್ ಪೇದೆ ಮತ್ತು ಬಿಲ್ ಕಲೆಕ್ಟರ್ ರವರುಗಳು ಶಾಮೀಲಾಗಿ ದಿನಾಂಕ:06.05.1955 ರಂದು ಶುದ್ಧ ಕ್ರಯ ಖರೀದಿ ಪತ್ರದನ್ವಯ ಮಾರಲಿಂಗ ಇವರು ಖರೀದಿ ಸ್ವತ್ತಿನ ಕ್ರಯಪತ್ರ ನೊಂದಣಿಯಾಗಿದ್ದು, ಪಂಚಾಯತ್ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ 2018-19 ರವರೆಗೆ ಮಾರನಲಿಂಗ ಸ್ವತ್ತಿನ ನಂ. 62 ಜಂಜರು ನಂ.66 ಎಂದು ಕೊಟ್ಟಿದ್ದು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರು ಯಾವುದೇ ನೋಟೀಸನ್ನು ಜಾರಿ ಮಾಡದೇ ಸರಸ್ವತಿ ಕೋಂ ಗುರುಲಿಂಗಪ್ಪ ಇವರಿಗೆ ಹೊಸದಾಗಿ ದಾಖಲೆ ಸೃಷ್ಟಿಸಿ ಇ-ಸ್ವತ್ತು ದಾಖಲೆ ಮಾಡಿರುತ್ತಾರೆ. ಗೌರೀಶ ರವರು ಪೋಲೀಸ್ ಇಲಾಖೆಯ ಸೇವೆಯಲ್ಲಿದ್ದು, ತಮ್ಮ ಹೆಸರಿಗೆ ಇ-ಸ್ವತ್ತು ಮಾಡಿಸಿಕೊಂಡ ನಂತರ ಸರಸ್ವತಿ ಎನ್ನುವವರಿಗೆ ದಾನಪತ್ರದ ಮೂಲಕ ನೀಡಲು ದಾಖಲೆ ಸೃಷ್ಟಿಸಿರುತ್ತಾರೆ ಎಂಬಂತೆ ನಮೂದಿಸಿ ದೂರು ಸಲ್ಲಿಸಿರುತ್ತಾರೆ.

ಈ ದೂರಿನ ಕುರಿತು ಶ್ರೀಮತಿ ಜಿ. ಶೋಭಾರಾಣಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಂತೂರು ಗ್ರಾಮ ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು ಇವರು ಆಕ್ಷೇಪಣೆ ಸಲ್ಲಿಸಿದ್ದು, ಕುಂತೂರು ಗ್ರಾಮದ ಅಂಬೇಡ್ಕರ್ ಹೊಸ ಬೀದಿಯ ಶ್ರೀ ಮೂರ್ತಿ ಎಂಬುವವರು ತಮ್ಮ ಪಿತ್ರಾರ್ಜಿತ ಆಸ್ತಿಗಳಿಗೆ ಸಂಬಂಧಿಸಿದಂತೆ ಜಂಜರು ನಂ.66 ಸ್ವತ್ತಿನ ಸಂಖ್ಯೆ:62 ರ ಸಂಬಂಧ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ

. . .2

ಹೊಸದಾಗಿ ಹೆಸರನ್ನು ಸೇರ್ಪಡೆಗೊಳಿಸಿ ತಿದ್ದುಪಡಿ ಮಾಡಿರುತ್ತಾರೆಂಬುದು ಸರಿಯಲ್ಲ, ಜಂಜರು ನಂ.66 ಆಸ್ತಿ ನಂ.62 ರಲ್ಲಿ ಮಾರನಲಿಂಗ ಎಂದು ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ ಪ್ರಸ್ತುತ ಚಾಲ್ತಿಯಲ್ಲಿದ್ದು, ಸದರಿಯವರ ಹೆಸರಿಗೆ ಯಾವುದೇ ಇ-ಸ್ವತ್ತು ನೀಡಿರುವುದಿಲ್ಲ ಹಾಗೂ ತಿದ್ದುಪಡಿಯೂ ಕೂಡಾ ಆಗಿರುವುದಿಲ್ಲ ಎಂಬಂತೆ ನಮೂದಿಸಿ ಸಮಜಾಯಿಷಿ ಸಲ್ಲಿಸಿರುವುದು ಲೋಕಾಯುಕ್ತರ ತನಿಖಾ ವರದಿಯಿಂದ ಕಂಡು ಬಂದಿದ್ದು, ಈ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರಿಂದ ತನಿಖೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಆಪಾದಿತ ಸರ್ಕಾರಿ ನೌಕರರು ದಾಖಲೆಗಳನ್ನು ಪರಿಶೀಲಿಸದೇ ನೊಂದಾಯಿತವಲ್ಲದ ಹಕ್ಕು ಪತ್ರ ಪಡೆದುಕೊಂಡು ಇ-ಸ್ವತ್ತು ಪ್ರತಿಯನ್ನು ತಯಾರಿಸಿ ಸಲ್ಲಿಸಿರುವುದರಿಂದ ಸಿವಿಲ್ ವ್ಯಾಜ್ಯಕ್ಕೆ ಕಾರಣರಾಗಿದ್ದು, ಇ-ಸ್ವತ್ತನ್ನು ದಾಖಲಿಸುವ ಪೂರ್ವದಲ್ಲಿ ದಾಖಲೆಗಳನ್ನು ಪರಿಶೀಲಿಸದೇ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಆದ್ದರಿಂದ, ಆಪಾದಿತ ನೌಕರರು ಕಾರ್ಯನಿರ್ವಹಣೆಯಲ್ಲಿ ಕರ್ತವ್ಯಲೋಪವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1) (i) ಮತ್ತು (iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕರ್ತವ್ಯಲೋಪವೆಸಗಿ ದುರ್ನಡತೆಯೆಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಹಾಗೂ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರನ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ನಿರ್ಧರಿಸಿ, ಅದರಂತೆ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 22 ಗ್ರಾಪಂಕಾ 2022</u>**

**<u>ಬೆಂಗಳೂರು, ದಿನಾಂಕ:30.04.2022.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಜಿ ಶೋಭಾರಾಣಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಂತೂರು ಗ್ರಾಮ ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M. M. 30/4/22

(ಎಂ.ಎಂ ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

30/4/22

<u>ಗೆ</u>,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 162).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಾಮರಾಜನಗರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ.
6. ಶ್ರೀಮತಿ ಜಿ ಶೋಭಾರಾಣಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಂತೂರು ಗ್ರಾಮ ಪಂಚಾಯಿತಿ, ಕೊಳ್ಳೇಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.